## 66. ರಾಜ್ಯದಲ್ಲಿ ಕೊರೋನಾ ಸೋಂಕು, ಚೇತರಿಕೆ ಹೆಚ್ಚಳ

ರಾಜ್ಯದಲ್ಲಿ ಒಂದೇ ದಿನ 6,805 ಪ್ರಕರಣಗಳು ದಾಖಲಾಗಿದ್ದು, 5,602 ಮಂದಿ ಸೋಂಕಿನಿಂದ ಗುಣಮುಖರಾಗಿದ್ದಾರೆ. ಕಳೆದೊಂದು ವಾರದಿಂದ ಹೆಚ್ಚಿನ ಸಂಖ್ಯೆಯಲ್ಲಿ ಸೋಂಕು ಮುಕ್ತರಾಗುತ್ತಿದ್ದು, ಶೇ.11.37ರಷ್ಟು ಚೇತರಿಕೆ ಕಾಣಿಸುತ್ತಿದೆ.

ಕೊರೋನಾ ಮಹಾಮಾರಿಯಿಂದ ಗುಣಮುಖರಾದವರ ಪ್ರಮಾಣ ಒಂದೇ ವಾರದಲ್ಲಿ ರಾಜ್ಯದಲ್ಲಿ ಶೇ.50.72 ಮತ್ತು ಬೆಂಗಳೂರಿನಲ್ಲಿ ಶೇ.50.34ಕ್ಕೆ ತಲುಪಿರುವುದು ನೆಮ್ಮದಿಯ ವಿಚಾರವಾಗಿದೆ. ಜುಲೈ 30ರಂದು ರಾಜ್ಯದ ಗುಣಮುಖರ ಪ್ರಮಾಣ ಶೇ.39.36 ಮತ್ತು ಬೆಂಗಳೂರಿನಲ್ಲಿ ಶೇ.29.51ರಷ್ಟಿತ್ತು. ಒಂದೇ ವಾರದಲ್ಲಿ ರಾಜ್ಯದಲ್ಲಿ ಶೇ.11.37ರಷ್ಟು ಮತ್ತು ಬೆಂಗಳೂರಿನಲ್ಲಿ ಶೇ.20.75ರಷ್ಟು ಹೆಚ್ಚಳವಾಗಿದೆ.

ಲಾಕ್‌ಡೌನ್ ತೆರವಾದ ಬಳಿಕ ಬೇರೆ ರಾಜ್ಯಗಳಲ್ಲಿ ಸೋಂಕಿತರ ಸಂಖ್ಯೆ ಹೆಚ್ಚಾಗಿದೆ. ಆದರೆ ನಮ್ಮ ರಾಜ್ಯದಲ್ಲಿ ಕೈಗೊಂಡ ಕಠಿಣ ಕ್ರಮಗಳಿಂದ ಸೋಂಕಿತರ ಸಂಖ್ಯೆ ಮತ್ತು ಸಾವಿನ ಸಂಖ್ಯೆ ಕಡಿಮೆಯಾಗಿದೆ. ಕಳೆದ 35 ದಿನಗಳಿಂದ ಸೋಂಕಿತರ ಸಂಖ್ಯೆ ಗಣನೀಯವಾಗಿ ಏರಿಕೆಯಾಗಲಾರಂಭಿಸಿದೆ. ಬೇರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ರಾಜ್ಯದಲ್ಲಿ ಮರಣ ಪ್ರಮಾಣ ಕಡಿಮೆ.

ರಾಜ್ಯದಲ್ಲಿ ಸೋಂಕಿತರ ಸಂಖ್ಯೆ ಒಟ್ಟು 1,58,258 ಆಗಿದ್ದು, 80,281 ಮಂದಿ ಗುಣಮುಖರಾಗಿ ಮನೆಗೆ ತೆರಳಿದ್ದಾರೆ. ಇನ್ನುಳಿದ 75,068 ಸೋಂಕಿತರು ನಿಗದಿತ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಒಂದೇ ದಿನ 93 ಮಂದಿ ಬಲಿಯಾಗಿದ್ದು, ಒಟ್ಟು 2,897 ಸೋಂಕಿತರು ಮೃತಪಟ್ಟಿದ್ದಾರೆ.

ವೈದ್ಯಕೀಯ ಶಿಕ್ಷಣ ಇಲಾಖೆಯ ಆಸ್ಪತ್ರೆಗಳಲ್ಲಿ 9,095 ಹಾಗೂ ಆರೋಗ್ಯ ಇಲಾಖೆಯ ಆಸ್ಪತ್ರೆಗಳಲ್ಲಿ 8,490 ಹಾಸಿಗೆಗೆ ಹೈ ಫ್ಲೋ ಆಕ್ಸಿಜನ್ ಅಳವಡಿಸಲಾಗಿದೆ. ಒಟ್ಟು 18,145 ಹಾಸಿಗೆಗಳಲ್ಲಿ ಆಕ್ಸಿಜನ್ ಸೌಲಭ್ಯವಿದೆ. ರಾಜ್ಯದಲ್ಲಿ ಕೋವಿಡ್ ಸೋಂಕಿತರಿಗೆ ಹಾಸಿಗೆ ಕೊರತೆಯಿಲ್ಲ.

**ಕೊರೋನಾ ಗುಣಮುಖರ ಪ್ರಮಾಣ ಹೆಚ್ಚಳ:**–ಲಾಕ್‌ಡೌನ್ ತೆರವಾದ ನಂತರ ಬೇರೆ ರಾಜ್ಯಗಳಲ್ಲಿ ಸೋಂಕಿತರ ಸಂಖ್ಯೆ ಹೆಚ್ಚಾಗಿದೆ. ಆದರೆ ನಮ್ಮ ರಾಜ್ಯದಲ್ಲಿ ಕೈಗೊಂಡ ಕಠಿಣ ಕ್ರಮಗಳಿಂದ ಸೋಂಕಿತರ ಸಂಖ್ಯೆ ಮತ್ತು ಸಾವಿನ ಸಂಖ್ಯೆ ಕಡಿಮೆಯಾಗಿದೆ. ಜುಲೈನಲ್ಲಿ ಮಾತ್ರ ಸೋಂಕಿತರ ಸಂಖ್ಯೆ ಏರಿಕೆಯಾಗಿತ್ತು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ:ಕೆ.ಸುಧಾಕರ್ ತಿಳಿಸಿದರು.

ಬೇರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ರಾಜ್ಯದಲ್ಲಿ ಮರಣ ಪ್ರಮಾಣ ಕಡಿಮೆ ಇದೆ. ಕರ್ನಾಟಕದಲ್ಲಿ ಕೊರೋನಾ ಸಾವಿನ ಪ್ರಮಾಣ ಪ್ರತಿ 10 ಲಕ್ಷಕ್ಕೆ 42 ಇದೆ. ನವದೆಹಲಿಯಲ್ಲಿ 204, ಮಹಾರಾಷ್ಟ್ರದಲ್ಲಿ 134, ತಮಿಳುನಾಡಿನಲ್ಲಿ 58, ಪಾಂಡಿಚೇರಿಯಲ್ಲಿ 43 ಮರಣ ಪ್ರಮಾಣ ಇದೆ. ಮುಂಬೈನಲ್ಲಿ ಪ್ರತಿ 10 ಲಕ್ಷಕ್ಕೆ 529, ಚೆನ್ನೈನಲ್ಲಿ 313, ಪುಣೆಯಲ್ಲಿ 258, ಅಹ್ಮದಾಬಾದ್‌ನಲ್ಲಿ 224, ಕೋಲ್ಕತ್ತದಲ್ಲಿ 191 ಮರಣ ಪ್ರಮಾಣ ಇದೆ. ಆದರೆ ಬೆಂಗಳೂರಿನಲ್ಲಿ 121 ಮರಣ ಪ್ರಮಾಣ ಇದೆ ಎಂದು ವಿವರಿಸಿದರು.

ಆಸ್ಪತ್ರೆಗಳಲ್ಲಿ ಹಾಸಿಗೆ ಖಾಲಿ ಇದೆ. ವೈದ್ಯಕೀಯ ಶಿಕ್ಷಣ ಇಲಾಖೆಯ ಆಸ್ಪತ್ರೆಗಳಲ್ಲಿ 9095 ಹಾಗೂ ಆರೋಗ್ಯ ಇಲಾಖೆಯ ಆಸ್ಪತ್ರೆಗಳಲ್ಲಿ 8490 ಹಾಸಿಗೆಗೆ ಹೈ ಫ್ಲೋ ಆಕ್ಸಿಜನ್ ಅಳವಡಿಸಲಾಗಿದೆ. ಒಟ್ಟು 18,145 ಹಾಸಿಗೆಗಳಲ್ಲಿ ಆಕ್ಸಿಜನ್ ಸೌಲಭ್ಯವಿದೆ ಎಂದು ಮಾಹಿತಿ ನೀಡಿದರು.

**ಜಿಲ್ಲಾವಾರು ಹೊಸ ಪ್ರಕರಣಗಳ ವಿವರ**

| | |
|---|---|
| ಬೆಂಗಳೂರು ನಗರ | 2,544 |
| ಬಳ್ಳಾರಿ | 431 |
| ಮೈಸೂರು | 361 |
| ಶಿವಮೊಗ್ಗ | 292 |
| ಬೆಳಗಾವಿ | 229 |

| | |
|---|---|
| ಉಡುಪಿ | 217 |
| ಧಾರವಾಡ | 212 |
| ದಾವಣಗೆರೆ | 197 |
| ಕಲಬುರಗಿ | 196 |
| ರಾಯಚೂರು | 181 |
| ದಕ್ಷಿಣ ಕನ್ನಡ | 173 |
| ಬಾಗಲಕೋಟೆ | 168 |
| ತುಮಕೂರು | 160 |
| ಹಾಸನ | 158 |
| ಮಂಡ್ಯ | 134 |
| ಕೊಪ್ಪಳ | 132 |
| ಗದಗ | 124 |
| ಚಿಕ್ಕಬಳ್ಳಾಪುರ | 117 |
| ಕೋಲಾರ | 107 |
| ಬೀದರ್ | 98 |
| ಚಾಮರಾಜನಗರ | 95 |
| ಉತ್ತರ ಕನ್ನಡ | 77 |
| ಹಾವೇರಿ | 64 |
| ಚಿಕ್ಕಮಗಳೂರು | 59 |
| ವಿಜಯಪುರ | 58 |
| ಚಿತ್ರದುರ್ಗ | 58 |
| ಕೊಡಗು | 51 |
| ರಾಮನಗರ | 41 |
| ಯಾದಗಿರಿ | 37 |
| ಬೆಂ.ಗ್ರಾಮಾಂತರ | 34 |

ಆಧಾರ:ವಿಶ್ವವಾಣಿ, ದಿನಾಂಕ:07.08.2020